KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-109
ಬುಧವಾರ 26 ಫೆಬ್ರವರಿ 2025
Price: 2.00 Rs. Pages-2

RNI: KARKAN/2023/88508

ಕರ್ನಾಟಕ ಸಕ್ಸೆಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

ಮಹಾ ಶಿವರಾತ್ರಿ ಹಬ್ಬದ ಶುಭಾಶಯಗಳು

ಪತ್ರಿಕೆಯ ಓದುಗರು, ಚಂದಾದಾರರು, ಜಾಹೀರಾತುದಾರರು, ಏಜೆಂಟರು, ಪತ್ರಿಕೆಯ ಒಡನಾಡಿಗಳಿಗೆ ಹಾಗೂ ನಾಡಿನ ಸಮಸ್ತ ಜನತೆಗೆ ಮಹಾಶಿವರಾತ್ರಿ ಹಬ್ಬದ ಹಾರ್ದಿಕ ಶುಭಾಶಯಗಳು

– ಸಂಪಾದರು,

ಡಾ. ಪುನೀತ್ ರಾಜಕುಮಾರ್ ಚಾರಿಟಬಲ್ ಟ್ರಸ್ಟ್‌ನ ಕಾರ್ಯಕ್ರಮದಲ್ಲಿ ಶ್ರೀ ಸಿದ್ದಲಿಂಗ ಸ್ವಾಮೀಜಿ

ಪುನೀತ್ ರಾಜ್‌ಕುಮಾರ್ ಹೆಸರಲ್ಲಿ ಸಮಾಜ ಸೇವೆ ಶ್ಲಾಘನೀಯ

ತುಮಕೂರು: ನಾಡಿನ ಜನರ ಅಭಿಮಾನ ಸಂಪಾದಿಸಿರುವ ಡಾ.ರಾಜಕುಮಾರ್ ಅವರ ಕುಟುಂಬ ಸಾಕಷ್ಟು ಸಾಮಾಜಿಕ ಸೇವೆಯಲ್ಲಿ ತೊಡಗಿರುವುದು ಶ್ರೇಷ್ಠ ಕಾರ್ಯ. ಪುನೀತ್ ರಾಜಕುಮಾರ್ ಅವರ ಹೆಸರಲ್ಲಿ ಸಮಾಜ ಸೇವೆ ಮುಂದುವರೆದಿರುವುದು ಶ್ಲಾಘನೀಯ ಎಂದು ಸಿದ್ಧಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಹೇಳಿದರು.

ನಗರದ ಸಿದ್ಧಗಂಗಾ ಮಠದಲ್ಲಿ ಡಾ. ಪುನೀತ್ ರಾಜಕುಮಾರ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಶ್ರೀಮಠದ ಶಾಲಾ ಮಕ್ಕಳು ಹಾಗೂ ಸಿಬ್ಬಂದಿ ವರ್ಗದವರಿಗೆ ಉಚಿತ ನೇತ್ರ ತಪಾಸಣೆ ಮತ್ತು ಕನ್ನಡಕ ವಿತರಣಾ ಸಮಾರಂಭದಲ್ಲಿ ಮಾತನಾಡಿದ ಅವರು, ಶ್ರೀಮಠದಲ್ಲಿರುವ ಎಲ್ಲ ಮಕ್ಕಳಿಗೂ ಕಣ್ಣಿನ ತಪಾಸಣೆ ಹಾಗೂ ಅಗತ್ಯವಿರುವ ವಿದ್ಯಾರ್ಥಿಗಳಿಗೆ ಕನ್ನಡಕ ಕೊಡಿಸುವ ಕೆಲಸವನ್ನು ಪ್ರತಿ ವರ್ಷ ಪುನೀತ್ ರಾಜ್‌ಕುಮಾರ್ ಟ್ರಸ್ಟ್ ವತಿಯಿಂದ ಮಾಡಲಾಗುತ್ತಿದೆ ಎಂದರು.

ಶ್ರೀಮಠದಲ್ಲಿ ಈಗಾಗಲೇ ಡಾ.ರಾಜ್ ಕುಮಾರ್ ಚಾರಿಟಬಲ್ ಟ್ರಸ್ಟ್ ಮೂಲಕ ಹಲವಾರು ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ. ಇದರೊಂದಿಗೆ ಈಗ ಡಾ. ಪುನೀತ್‌ರಾಜ್ ಕುಮಾರ್ ಚಾರಿಟಬಲ್ ಟ್ರಸ್ಟ್ ಉದ್ಘಾಟನೆಗೊಂಡಿರುವುದು ಸಂತಸ ತಂದಿದೆ ಎಂದ ಅವರು, ಶಂಕರ್ ಕಣ್ಣಿನ ಆಸ್ಪತ್ರೆ, ಟೈಟಾನ್ ಸಂಸ್ಥೆ ಹಾಗೂ ಟ್ರಸ್ಟ್ ವತಿಯಿಂದ ಕಣ್ಣಿನ ಸಮಸ್ಯೆಯಿಂದ ಬಳಲುತ್ತಿರುವ ಮಠದ ಮಕ್ಕಳು ಮತ್ತು ಸಿಬ್ಬಂದಿಗಳಿಗೆ ಉಚಿತ ನೇತ್ರ ತಪಾಸಣೆ ನಡೆಸಿ 800 ಮಕ್ಕಳಿಗೆ ಕನ್ನಡ ವಿತರಣೆ ಮಾಡಲಾಗಿದೆ ಎಂದು ಹೇಳಿದರು.

ಮೊಬೈಲ್ ಬಳಸುತ್ತಿರುವ ಕಾರಣದಿಂದ ಕಣ್ಣಿನ ಸಮಸ್ಯೆಗೆ ತುತ್ತಾಗುತ್ತಿರುವ ಪ್ರಕರಣ ಜಾಸ್ತಿಯಾಗುತ್ತಿದೆ. ಮಕ್ಕಳು ಕಣ್ಣಿನ ಆರೋಗ್ಯದ ಕಡೆಗೆ ಹೆಚ್ಚು ಗಮನ ನೀಡುವ ಅಗತ್ಯವಿದೆ. ಅವಶ್ಯಕತೆ ಇರುವಷ್ಟು ಮಾತ್ರ ಮೊಬೈಲ್ ಬಳಸಿಕೊಳ್ಳಬೇಕು ಎಂದು ಶ್ರೀಗಳು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಹಿರಿಯರಿಂದ ಕಿರಿಯರವರೆಗೂ ಕಣ್ಣಿನ ಸಮಸ್ಯೆಗಳು ಕಂಡು ಬರುತ್ತಿದ್ದು, ಮೊಬೈಲ್ ಮತ್ತು ಟಿ.ವಿ ಉಪಕರಣಗಳನ್ನು ಅಗತ್ಯಕ್ಕೆ ತಕ್ಕಂತೆ ಉಪಯೋಗಿಸುವ ಮೂಲಕ ಕಣ್ಣಿನ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಹೇಳಿದರು.

ಡಾ. ಪುನೀತ್ ರಾಜ್ ಕುಮಾರ್ ಅವರ ಹಾದಿಯಲ್ಲೇ ಅವರ ಶ್ರೀಮತಿ ಸಾಮಾಜಿಕ ಕಳಕಳಿಯುಳ್ಳ ಕೆಲಸಗಳನ್ನು ಮಾಡುವ ಮೂಲಕ ಡಾ. ಪುನೀತ್ ರಾಜ್ ಕುಮಾರ್ ಟ್ರಸ್ಟ್ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಅಶ್ವಿನಿ ಪುನೀತ್ ರಾಜಕುಮಾರ್, ಹಿರಿಯ ನಟ ದೊಡ್ಡಣ್ಣ, ಪಿ. ವಾಸನ್, ಕರ್ನಲ್ ಗುರುಪ್ರಸಾದ್, ಸಿದ್ಧಗಂಗಾ ಆಸ್ಪತ್ರೆಯ ನಿರ್ದೇಶಕ ಡಾ. ಪರಮೇಶ್, ಡಾ.ರವಿಂದ್ರ ನಾಯಕ, ಗೋಣಿ ಬಗೀರಪ್ಪ, ಪ್ರೊ. ಜಿ.ಎಸ್. ರೇಣುಕಪ್ಪ ಮತ್ತಿತರರು ಉಪಸ್ಥಿತರಿದ್ದರು.

ಫೆ.28: ತುಮಕೂರು ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ

ತುಮಕೂರು: ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಹಾಗೂ ತಾಲ್ಲೂಕು ಘಟಕದ ವತಿಯಿಂದ ತುಮಕೂರು ತಾಲ್ಲೂಕು ಕೋರಾ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಆವರಣದಲ್ಲಿ ಫೆಬ್ರವರಿ 28ರಂದು "ತುಮಕೂರು ತಾಲ್ಲೂಕು 7ನೇ ಕನ್ನಡ ಸಾಹಿತ್ಯ ಸಮ್ಮೇಳನ"ವನ್ನು ಏರ್ಪಡಿಸಲಾಗಿದೆ.

ಸಮ್ಮೇಳನದ ಅಂಗವಾಗಿ ಅಂದು ಬೆಳಿಗ್ಗೆ 7.30 ಗಂಟೆಗೆ ಧ್ವಜಾರೋಹಣ, 8.30 ಗಂಟೆಗೆ ಸಮ್ಮೇಳನಾಧ್ಯಕ್ಷರ ಮೆರವಣಿಗೆ, 10 ಗಂಟೆಗೆ ವೇದಿಕೆ ಕಾರ್ಯಕ್ರಮ ಉದ್ಘಾಟನೆ ಕಾರ್ಯಕ್ರಮ ನಡೆಯಲಿವೆ. ಸಮ್ಮೇಳನದ ಪ್ರಯುಕ್ತ ಫೆಬ್ರವರಿ 28ರ ಮಧ್ಯಾಹ್ನ 12 ಗಂಟೆಗೆ ಸಮ್ಮೇಳನಾಧ್ಯಕ್ಷ ಎಂ.ನಂಜಯ್ಯ ಅವರ ಸಾಹಿತ್ಯಾವಲೋಕನ; 12.45 ಗಂಟೆಗೆ ಕೋರಾ-ಸ್ಥಳೀಯ ಸಾಂಸ್ಕೃತಿಕತೆ, ಶೈಕ್ಷಣಿಕ ನಗರಿಯಿಂದ-ಕೈಗಾರಿಕಾ ನಗರಿಯತ್ತ ತುಮಕೂರು, ಜಾನಪದ ಕಲೆ ಮತ್ತು ಸಾಹಿತ್ಯದ ಮೇಲೆ ನಗರೀಕರಣದ ಪ್ರಭಾವ; 2.30 ಗಂಟೆಗೆ ರಂಗಭೂಮಿ ಮತ್ತು ಸಂಗೀತ, 3.30 ಗಂಟೆಗೆ ಕವಿ ಸಮಯ ಗೋಷ್ಠಿಗಳು ನಡೆಯಲಿವೆ. ಸಂಜೆ 4.45 ಗಂಟೆಗೆ ಆಜೀವ ಸದಸ್ಯರ ಬಹಿರಂಗ ಅಧಿವೇಶನ, 5 ಗಂಟೆಗೆ ಸನ್ಮಾನ ಮತ್ತು ಸಮಾರೋಪ ಸಮಾರಂಭ ನಡೆಯಲಿದೆ ಎಂದು ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಚಿಕ್ಕಬೆಳ್ಳಾವಿ ಶಿವಕುಮಾರ್ ತಿಳಿಸಿದ್ದಾರೆ.

'ಅಂಗವಿಕಲ ಪ್ರತ್ಯೇಕ ಸಚಿವಾಲಯ, ಅಭಿವೃದ್ಧಿ ನಿಗಮ ಸ್ಥಾಪನೆ'ಗಾಗಿ ಒತ್ತಾಯ

ತುಮಕೂರು: ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ಅಂಗವಿಕಲ ಪ್ರತ್ಯೇಕ ಸಚಿವಾಲಯ, ಅಭಿವೃದ್ಧಿ ನಿಗಮ ಸ್ಥಾಪನೆಗೆ ಆದ್ಯತೆ ನೀಡಬೇಕು ಹಾಗೂ 2025-26ನೇ ಸಾಲಿನ ಬಜೆಟ್‌ನಲ್ಲಿ ಹಲವು ಬೇಡಿಕೆಗಳನ್ನು ಈಡೇರಿಸಬೇಕೆಂದು ಜಿಲ್ಲಾ ಅಂಗವಿಕಲರ ಕಲ್ಯಾಣ ವೇದಿಕೆ ಒತ್ತಾಯಿಸಿದೆ.

ಅಂಗವಿಕಲರ ಕಲ್ಯಾಣ ಇಲಾಖೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಬೇರ್ಪಡಿಸಬೇಕು, ಅಂಗವಿಕಲರಿಗೆ ಮೀಸಲಿಟ್ಟ ಶೇ.5 ರ ಅನುದಾನ ಸಮರ್ಪಕವಾಗಿ ಬಳಸಬೇಕು, ಅಂಗವಿಕಲರ ಕುಂದುಕೊರತೆ ಸಭೆಯು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಬೇಕು ಎಂದು ವೇದಿಕೆ ಅಧ್ಯಕ್ಷ ಸಿ.ಗಂಗರಾಜು ಪ್ರಧಾನ ಕಾರ್ಯದರ್ಶಿ ಇನಾಯಿತ್ ಖಾನ್ ಒತ್ತಾಯಿಸಿದ್ದಾರೆ.

ಸ್ವಯಂ ಉದ್ಯೋಗ ದೊರಕಿಸುವ ಆಧಾರ್ ಯೋಜನೆಯ ಸಹಾಯಧನವನ್ನು 1 ಲಕ್ಷದಿಂದ 5 ಲಕ್ಷಕ್ಕೆ ಹೆಚ್ಚಿಸಬೇಕು, ಮಾಸಾಶನ ಹೆಚ್ಚಳ ಮಾಡಬೇಕು, ಸ್ವಯಂ ಉದ್ಯೋಗ ಕೈಗೊಳ್ಳಲು ತರಬೇತಿ ಸಂಸ್ಥೆ ಪ್ರಾರಂಭಿಸಬೇಕು, ಅಂಗವಿಕಲರು ತಯಾರಿಸಿದ ಉತ್ಪನ್ನ ಮಾರಾಟಕ್ಕೆ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವುದು, ಅಂಗವಿಕಲರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಹಾಗೂ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ನೀಡಬೇಕು ಎಂದು ಅವರು ಸಚಿವರುಗಳಾದ ಡಾ. ಜಿ. ಪರಮೇಶ್ವರ್ ಹಾಗೂ ಕೆ.ಎನ್. ರಾಜಣ್ಣ ಮೂಲಕ ಮುಖ್ಯ ಮಂತ್ರಿಗಳಿಗೆ ಮನವಿ ಸಲ್ಲಿಸಿ ಕೋರಿದ್ದಾರೆ.

ಇತಿಹಾಸ ಪ್ರಸಿದ್ಧ ಹೆತ್ತೇನಹಳ್ಳಿಯ ಶ್ರೀ ಮಾರಮ್ಮ ಆಧಿಶಕ್ತಿ ದೇವಿಯ ಜಾತ್ರಾ ಮಹೋತ್ಸವ ಆರಂಭ

ತುಮಕೂರು: ಇತಿಹಾಸ ಪ್ರಸಿದ್ಧ ಹೆತ್ತೇನಹಳ್ಳಿಯ ಶ್ರೀ ಮಾರಮ್ಮ ಆಧಿಶಕ್ತಿ ದೇವಿಯ ಜಾತ್ರಾ ಮಹೋತ್ಸವ ರಾತ್ರಿಯಿಂದ ಆರಂಭವಾಗಿದ್ದು, ಶ್ರೀ ಅಮ್ಮನವರ ರಥೋತ್ಸವ ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ಇಂದು ಮುಂಜಾನೆ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ಪ್ರತಿ ವರ್ಷದಂತೆ ಈ ಬಾರಿಯೂ ಮುಂಜಾನೆ ನಡೆದ ಹೆತ್ತೇನಹಳ್ಳಿಯಮ್ಮನ ರಥೋತ್ಸವಕ್ಕೆ ನಾಡಿನ ವಿವಿಧೆಡೆಗಳಿಂದ ಆಗಮಿಸಿದ್ದ ಭಕ್ತ ಸಮೂಹ ಸಾಕ್ಷಿಯಾಯಿತು.

ತುಮಕೂರು ತಾಲ್ಲೂಕಿನ ಗೂಳೂರು ಹೋಬಳಿಯ ಹೆತ್ತೇನಹಳ್ಳಿ, ಕೈದಾಳ, ಗೂಳೂರು, ಕಂಭತ್ತನಹಳ್ಳಿ, ರಂಗಯ್ಯನ ಪಾಳ್ಯ, ಚಿಕ್ಕಸಾರಂಗಿ, ನರುಗನಹಳ್ಳಿ, ಮಾಯಣ್ಣಗೌಡನ ಪಾಳ್ಯ ಸೇರಿದಂತೆ ಈ ಭಾಗದ ಹಳ್ಳಿಗಳಲ್ಲಿ ಹೆತ್ತೇನಹಳ್ಳಿಯಮ್ಮನ ಜಾತ್ರೆಗೆ ವಿಶೇಷವಾಗಿಯೇ ಭಕ್ತ ಸಮೂಹ ಸಜ್ಜಾಗುತ್ತಾರೆ. ಅದರಂತೆ ಸೋಮವಾರ ಇಡೀ ದಿನ ಭಕ್ತರು ಉಪವಾಸ ವ್ರತ ಮಾಡಿ ಮುಂಜಾನೆ ಅಗ್ನಿಕೊಂಡ ಹಾಯ್ದು ಅಮ್ಮನವರಿಗೆ ಹರಕೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು.

ಇನ್ನು ಈ ಭಾಗದ ಹೆಣ್ಣು ಮಕ್ಕಳು ಅಮ್ಮನವರಿಗೆ ಬಾಯಿ ಬೀಗದ ಹರಕೆ ತೀರಿಸುವ

ಸಂಪ್ರದಾಯ ಹಿಂದಿನಿಂದ ಲೂ ನಡೆದು ಕೊಂಡು ಬಂದಿದೆ. ಹದಿ ಹರೆಯದ ಹೆಣ್ಣು ಮಕ್ಕಳು, ಮಹಿಳೆಯರು ಸಹ ಉಪವಾಸ ವ್ರತ ಮಾಡಿ ರಾತ್ರಿ ಅಮ್ಮನವರ ಸನ್ನಿಧಿಯಲ್ಲಿ ಬಾಯಿಬೀಗ ಹಾಕಿಸಿಕೊಂಡು ಪೂಜೆ ಸಲ್ಲಿಸುವ ಮೂಲಕ ತಮ್ಮ ಹರಕೆ ತೀರಿಸಿದರು.

ಹೆತ್ತೇನಹಳ್ಳಿ ಜಾತ್ರೆಗೆಂದೇ ಕಂಭತ್ತನಹಳ್ಳಿಯ ವೀರ ಮಕ್ಕಳು ಒಂದು ವಾರದಿಂದ ಉಪವಾಸವಿದ್ದು, ನಸುಕಿನಲ್ಲಿ ಅಗ್ನಿಕೊಂಡ ಹಾಯುವ ಮೂಲಕ ಹರಕೆ ತೀರಿಸಿದ್ದು ವಿಶೇಷವಾಗಿತ್ತು. ನಾಡಿನ ನಾನಾ ಕಡೆಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಆಗಮಿಸಿದ್ದ ಭಕ್ತ ಸಮೂಹ ಅಗ್ನಿಕೊಂಡ ಹಾಯ್ದ ಬಳಿಕ ವಿವಿಧ ಬಗೆಯ ಪುಷ್ಪಗಳಿಂದ ವರ್ಣರಂಜಿತವಾಗಿ ಅಲಂಕರಿಸಲಾಗಿದ್ದ ರಥಕ್ಕೆ ಹೆತ್ತೇನಹಳ್ಳಿಯಮ್ಮ ದೇವಿಯನ್ನು ಕೂರಿಸುತ್ತಿದ್ದಂತೆ ನೆರೆದಿದ್ದ ಭಕ್ತರ ಹರ್ಷೋದ್ಗಾರ ಮುಗಿಲು ಮುಟ್ಟಿತು.

ಅಮ್ಮನವರನ್ನು ರಥಕ್ಕೆ ಕೂರಿಸಿದ ಬಳಿಕ ಭಕ್ತರು ರಥವನ್ನು ಎಳೆಯಲು ನಾ.. ಮುಂದು, ತಾ.. ಮುಂದು ಎಂದು ಮುಗಿ ಬೀಳುತ್ತಿದ್ದ ದೃಶ್ಯ ಕಂಡು ಬಂತು.

ಅಮ್ಮನವರ ಅರ್ಚಕರು, ತಹಶೀಲ್ದಾರ್ ರಥದ ಗಾಲಿಗೆ ತೆಂಗಿನ ಕಾಯಿ ಒಡೆದು ಅಮ್ಮನವರಿಗೆ ಪೂಜೆ ಸಲ್ಲಿಸಿದ ನಂತರ ರಥದ ಗಾಲಿ ಒಂದು ಸುತ್ತು ಉರುಳುತ್ತಿದ್ದಂತೆ ಭಕ್ತರು ಶ್ರದ್ಧಾ ಭಕ್ತಿಯಿಂದ ರಥಕ್ಕೆ ಹೂವು, ದವನ, ಬಾಳೆಹಣ್ಣು ಎಸೆದು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಮಾಡಿಕೊಂಡಿದ್ದ ಹರಕೆಯನ್ನು ತೀರಿಸಿದರು.

ಇಡೀ ರಾತ್ರಿ ಹೆತ್ತೇನಹಳ್ಳಿಯಲ್ಲಿ ಜಮಾಯಿಸಿದ್ದ ಭಕ್ತ ಸಮೂಹ ಅಗ್ನಿಕೊಂಡ ಹಾಯ್ದು, ರಥೋತ್ಸವದಲ್ಲಿ ಪಾಲ್ಗೊಂಡು ಪುನೀತರಾದರು.

ಹೆತ್ತೇನಹಳ್ಳಿಯಮ್ಮನ ಜಾತ್ರೆ ಒಂದು ವಾರ ಕಾಲ ನಡೆಯಲಿದ್ದು, ಶನಿವಾರದ ವರೆಗೆ ಭಕ್ತಾದಿಗಳ ದಂಡು ಹೆತ್ತೇನಹಳ್ಳಿಗೆ ಹರಿದು ಬರಲಿದೆ.

ರಥೋತ್ಸವದಲ್ಲಿ ಶಾಸಕ ಸುರೇಶ್‌ಗೌಡ, ತಹಶೀಲ್ದಾರ್ ರಾಜೇಶ್ವರಿ, ಉಪತಹಶೀಲ್ದಾರ್ ಭಾನುಪ್ರಕಾಶ್, ರವಿನ್ಯೂ ಇನ್ಸ್‌ಪೆಕ್ಟರ್ ರಮೇಶ್ ಕುಮಾರ್ ಹಾಗೂ ಗೂಳೂರು ಹೋಬಳಿಯ ಗ್ರಾಮ ಆಡಳಿತಾಧಿಕಾರಿ ಗಳು ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಭಕ್ತಾದಿಗಳು ಭಾಗವಹಿಸಿದ್ದರು.

ಒಂದು ವಾರಗಳ ಕಾಲ ನಡೆಯಲಿರುವ ಹೆತ್ತೇನಹಳ್ಳಿ ಜಾತ್ರೆಯಲ್ಲಿ ಯಾವುದೇ ರೀತಿಯ ಅಹಿತರ ಘಟನೆಗಳು, ಕಳ್ಳತನಗಳು ನಡೆಯದಂತೆ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

ಪಿ.ಎಫ್, ಕನಿಷ್ಟ ಪಿಂಚಣಿಗೆ ಒತ್ತಾಯಿಸಿ ಪಿಂಚಣಿದಾರರ ಪ್ರತಿಭಟನೆ; ಮನವಿ

ತುಮಕೂರು: ಕಾರ್ಮಿಕರ ಪಿಂಚಣಿಯೊಜನೆ [ಇ.ಪಿ.ಎಸ್]- 1995 ರಡಿಯಲ್ಲಿ ಕನಿಷ್ಟ ಪಿಂಚಣಿ ಮಾಸಿಕ ರೂ.1000 ಮಾತ್ರ ನೀಡಲಾಗುತ್ತಿದೆ. ಹತ್ತಾರು ವರ್ಷಗಳ ಕಾಲ ಕೆಲಸ ಮಾಡಿ ಭವಿಷ್ಯ ನಿಧಿ ವಂತಿಕೆ ಪಾವತಿಸಿದರೆ 58 ವರ್ಷ ವಯಸ್ಸಾದಾಗ ಮಾಸಿಕ ಕನಿಷ್ಟ ಪಿಂಚಣಿಯನ್ನು 1000 ರೂಪಾಯಿಗಳಷ್ಟ ಮಾತ್ರ ನೀಡಲಾಗಿದೆ.. ಇದು ಏನೇನು ಸಾಲದು ಮತ್ತುಒಮ್ಮೆ ನಿಗಧಿಯಾದ ಪಿಂಚಣಿಯು ಹೆಚ್ಚಳವೆ ಮಾಡದೆ ಇರುವಕ್ರಮ ಸರಿಯಲ್ಲ ಎಂದು ಪಿ.ಎಫ್ ಪಿಂಚಣಿದಾರರ ಸಂಘದ ಜಿಲ್ಲಾ ಸಂಚಾಲಕ ಟಿ.ಜಿ. ಶಿವಲಿಂಗಯ್ಯ ಅಭಿಪ್ರಾಯಪಟ್ಟರು.

ಮಾಸಿಕ ಕನಿಷ್ಟ ಪಿಂಚಣಿಯನ್ನು 6000 ರೂ ನಿಗಧಿ ಮಾಡಿ ಪಿ.ಎಫ್ ಪಿಂಚಣಿಗೆ ಬೆಲೆ ಏರಿಕೆ ಅಧಾರಿತವಾಗಿ ತುಟ್ಟಿ ಭತ್ಯೆಯನ್ನು ನೀಡುವಂತೆ ಎಲ್ಲಾ ಪಿಂಚಣಿದಾರರ ಆನಾರೋಗ್ಯದ ಸಮಯದಚಿಕಿತ್ಸಾ ವೆಚ್ಚಗಳನ್ನು ಭರಿಸುವಂತೆ ಸರ್ಕಾರವನ್ನು ಒತ್ತಾಯಿಸಿದರು ಅವರು ಕರ್ನಾಟಕರಾಜ್ಯ ಪಿಂಚಣಿದಾರರ ಸಂಘವು ಜಿಲ್ಲಾಧಿಕಾರಿಗಳ ಕಛೇರಿ ಎದರು ನಡೆದ ಪ್ರತಿಭಟನೆಯಲ್ಲಿ ಮಾತನಾಡಿದರು .

ಇಳಿ ವಯಸ್ಸಿನಲ್ಲಿ 800- 1000 ರೂ ಮಾಸಿಕ ಪಿಂಚಣಿಯಲ್ಲಿ ಬದುಕು ನಿರ್ವಹಣೆಯು ಮಾಡುವುದು ಕಷ್ಟಕರವಾಗಿದೆ ಎಂದು ಜಿ.ಜೆ ರಾಜೇಂದ್ರ ಕುಮಾರ್ ಅವರು ಅಭಿಪ್ರಾಯ ಪಟ್ಟರು. ಜಿಲ್ಲಾ ಬೀಡಿ ಕಾರ್ಮಿಕರ ಸಂಘ.ರಿ. ಅಧ್ಯಕ್ಷರಾದ. ಶಹಾತಾಜ್ ಅವರು ಮಾತನಾಡಿ ಬೀಡಿ ಕಾರ್ಮಿಕರಲ್ಲಿ ಕೆಲವರಿಗೆ ಹಿಂದಿನ ಕನಿಷ್ಟ ಪಿಂಚಣಿ 1000 ರೂ ಸಹ ಬರುತ್ತಿಲ್ಲ ಕೆವಲ 600- 800 ರೂ ಮಾಸಿಕ ಪಿಂಚಣಿ ಬರುತ್ತಿದೆ , ಇದಕ್ಕಿಂದ ಸರ್ಕಾರ ಸಮಾಜಿಕ ಭದ್ರತೆಯ ಭಾಗವಾಗಿ ನೀಡುವ ಪಿಂಚಣಿಗೆ ಹೆಚ್ಚಿದೆ ಎಂದು ಅರೊಪಿಸಿ ಪಿಂಚಣಿ ಹೆಚ್ಚಳಕ್ಕೆ ಒತ್ತಾಯಿಸಿದರು

ಸಿಐಟಿಯು ಜಿಲ್ಲಾ ಅಧ್ಯಕ್ಷ ಸೈಯದ್ ಮುಜೀಬ್ ಮಾತನಾಡಿ ಕೇಂದ್ರ ಸರ್ಕಾರ ಸಾಮಾಜಿಕ ಭದ್ರತೆ ಸಂಬಂಧಿತ ಅಂತರಾಷ್ಟ್ರೀಯ ಕಾರ್ಮಿಕ ಸಂಘಟನೆಗಳ ಒಡಂಬಡಿಕೆಗೆ ಸಹಿ ಹಾಕಿದೆ. ಅದರು ಹಿರಿಯ ನಾಗರಿಕರಿಗೆ ಯೋಗ್ಯ - ನ್ಯಾಯೋಚಿತ ಪಿಂಚಣಿ ನೀಡುದೆ ಇರುವುದು ಸರಿಯಲ್ಲ ಎಂದರು.ಸಿಐಟಿಯು ಜಿಲ್ಲಾ ಖಜಾಂಚಿ ಎ. ಲೊಕೇಶ್, ಉಪಾಧ್ಯಕ್ಷ ಷಣ್ಮಖಪ್ಪ, ಎನ್.ಕೆ. ಸುಬ್ರಮಣ್ಯ, ಚಂದ್ರಶೇಖರ್ ಇತರರು ಮಾತನಾಡಿದರು.

ಪ್ರತಿಭಟನಾರಕಾರರು ಜಿಲ್ಲಾಧಿಕಾರಿಗಳ ಕಛೇರಿ ಮೋಹನ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಪಿಂಚಣಿದಾರರು ಅವಲಂಬಿತರಿಗೆಉಚಿತ ವೈದ್ಯಕೀಯ ಸೌಲಭ್ಯ ನೀಡಲುಕ್ರಮ ವಹಿಸಬೇಕು ಸಹ ಪ್ರತಿಭಟನಾಕಾರರು ಸರ್ಕಾರವನ್ನು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಬಾಲಕೃಷ್ಣ, ಶಿವಣ್ಣ, ಅನಂದಮೂರ್ತಿ ಇತರರು ಭಾಗವಹಿಸಿದ್ದರು.

ಅಮೃತೂರು ಪೊಲೀಸ್ ಕಛೇರಿ ಸ್ಥಳಾಂತರಕ್ಕೆ ಸಾರ್ವಜನಿಕರಿಂದ ಒತ್ತಾಯ

ಕುಣಿಗಲ್: ತಾಲೂಕಿನ ಅಮೃತೂರು ಪೊಲೀಸ್ ವೃತ್ತ ನಿರೀಕ್ಷಕರ ಕಚೇರಿಯನ್ನು ಕುಣಿಗಲ್ ಅಥವಾ ಹುಲಿಯೂರ್ಗದಲ್ಲಿ ಸ್ಥಾಪಿಸಿ ಜನಸಾಮಾನ್ಯರಿಗೆ ಅನುಕೂಲ ಕಲ್ಪಿಸಬೇಕೆಂದು ಸಾರ್ವಜನಿಕರು, ರೈತರು ಒತ್ತಾಯಪಡಿಸಿದರು.

ಹುಲಿಯೂರುದುರ್ಗ ಪೊಲೀಸ್ ಠಾಣಾ ವ್ಯಾಪ್ತಿಯ ಜನಸಂಪರ್ಕ ಸಭೆಯನ್ನು ಅಮೃತೂರು ಪೊಲೀಸ್ ವೃತ ನಿರೀಕ್ಷಕರಾದ ಮಾದ್ಯಾ ನಾಯಕ್ ನೇತೃತ್ವದಲ್ಲಿ ಆಯೋಜಿಸಲಾಗಿತ್ತು ಸಾರ್ವಜನಿಕರು, ರೈತರು, ಗಣ್ಯ ವ್ಯಕ್ತಿಗಳು ಭಾಗವಹಿಸಿ ಮಾತನಾಡುತ್ತಾ ನೂತನವಾಗಿ ಆರಂಭಗೊಂಡಿರುವ ಅಮೃತೂರು ಪೋಲೀಸ್ ವೃತ್ತ ನಿರೀಕ್ಷಕರ ಕಚೇರಿಯನ್ನು ಸರ್ಕಾರ ಅಮೃತೂರಿನಲ್ಲಿ ಸ್ಥಾಪನೆ ಮಾಡಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗಿದ್ದು ಕುಣಿಗಲ್ ಅಥವಾ ಹುಲಿಯೂರುದುರ್ಗ ಕೇಂದ್ರಸ್

ಪುನರ್ಮನನ ತರಬೇತಿ: ಗೃಹರಕ್ಷಕ ಮಲ್ಲಿಕಾರ್ಜುನಯ್ಯರಿಗೆ ಚಿನ್ನದ ಪದಕ

ತುಮಕೂರು: ಬಳ್ಳಾರಿ ಜಿಲ್ಲೆ ಮೀನಹಳ್ಳಿ ಪ್ರಾದೇಶಿಕ ತರಬೇತಿ ಕೇಂದ್ರದಲ್ಲಿ ಫೆಬ್ರವರಿ 3 ರಿಂದ 14ರವರೆಗೆ ಏರ್ಪಡಿಸಿದ್ದ ಪುನರ್ವರ್ಜನ ತರಬೇತಿಯಲ್ಲಿ ಜಿಲ್ಲೆಯ ಗುಬ್ಬಿ ತಾಲ್ಲೂಕು ಘಟಕಾಧಿಕಾರಿ(ಪ್ರಭಾರ) ಮಲ್ಲಿಕಾರ್ಜುನಯ್ಯ ಅವರು ಪ್ರಥಮ ಸ್ಥಾನ ಪಡೆದು ಚಿನ್ನದ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ.

ಮಲ್ಲಿಕಾರ್ಜುನಯ್ಯ ಅವರಿಗೆ ಚಿನ್ನದ ಪದಕ ಲಭಿಸಿರುವುದು ಇತರೆ ಗೃಹರಕ್ಷಕರಿಗೆ ಪ್ರೇರಣೆಯಾಗಿದ್ದು, ಜಿಲ್ಲೆಗೆ ಹೆಮ್ಮೆ ತರುವ ಸಂಗತಿಯಾಗಿದೆ ಎಂದು ಗೃಹರಕ್ಷಕ ದಳ ಘಟಕ ಕಚೇರಿಯ ಅಧಿಕಾರಿ/ಸಿಬ್ಬಂದಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಪದಕ ಗಳಿಸಿದ ಮಲ್ಲಿಕಾರ್ಜುನಯ್ಯ ಅವರನ್ನು ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿ.ಮರಿಯಪ್ಪ, ಉಪ ಸಮಾದೇಷ್ಟ ಆರ್. ರಾಜೇಂದ್ರನ್, ಬೋಧಕರಾದ ಶಿವಪ್ರಸಾದ್, ಸಹಾಯಕ ಬೋಧಕ ಶ್ರೀನಿವಾಸ್, ಸೇರಿದಂತೆ ಮತ್ತಿತರರು ಅಭಿನಂದಿಸಿದ್ದಾರೆ.

ಶಿವರಾತ್ರಿ; ಮಧುಗಿರಿ ತಾಲ್ಲೂಕಿನ ವಿವಿಧೆಡೆ ಪೂಜಾ ಕೈಂಕರ್ಯ

ಮಧುಗಿರಿ: ತಾಲೂಕಿನಲ್ಲಿ ಮಹಾಶಿವರಾತ್ರಿ ಅಂಗವಾಗಿ ವಿಶೇಷ ಪೂಜೆಗಳನ್ನು ಹಲವು ದೇವಾಲಯಗಳಲ್ಲಿ ಆಯೋಜಿಸಲಾಗಿದೆ .

ಪಟ್ಟಣದಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಪ್ರಸನ್ನ ಪಾರ್ವತಿ ಸಮೇತ ಮಲ್ಲೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಬೆಳಿಗ್ಗೆ 6:00 ರಿಂದ ರುದ್ರಾಭಿಷೇಕ, ವಿಶೇಷ ಪೂಜೆ ಮತ್ತು ರಾತ್ರಿ 10:30 ರಿಂದ ಬೆಳಿಗ್ಗೆ 5:00 ಗಂಟೆಯವರೆಗೂ 4 ಯಾಮಗಳ ರುದ್ರಾಭಿಷೇಕ ಪೂಜೆ ನಡೆಯಲಿದೆ.

ಅಂದು ಬೆಳಗಿನ ಜಾವ ಐದು ಗಂಟೆಯಿಂದ 7 ರವರೆಗೂ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಹೇಮಾವತಿ ವಲಯ ಮಧುಗಿರಿ ಶಾಖಾ ವತಿಯಿಂದ ಏಕಾತ್ಮತಾ ಸ್ತೋತ್ರ, ಅಗ್ನಿಹೋತ್ರ ,11 ಸುತ್ತಿನ ಶಿವ ನಮಸ್ಕಾರ ನಡೆಯಲಿದೆ. ಅಂದು ರಾತ್ರಿ ವೇದ ಬ್ರಹ್ಮಶ್ರೀ ಕೆ. ನಾಗರಾಜ ಶಾಸ್ತ್ರಿಗಳು ಮತ್ತು ತಂಡದವರಿಂದ ರಾತ್ರಿ 10:30 ರಿಂದ 12 ರ ವರೆಗೂ ಮೊದಲ ಯಾಮದ ಪೂಜೆ, 12ರಿಂದ 1:30 ವರೆಗೂ ಎರಡನೆಯಮ ಪೂಜೆ, ರಾತ್ರಿ 1:30 ರಿಂದ 3ರವರೆಗೆ ಮೂರನೇಯ ಪೂಜೆ, ಪೂಜೆ ರಾತ್ರಿ ಮೂರು ರಿಂದ ಬೆಳಗಿನ ಜಾವ ಐದು ಗಂಟೆವರೆಗೂ ನಾಲ್ಕನೇಯ ಪೂಜೆ ನಡೆಯಲಿದೆ.

ಮಧ್ಯರಾತ್ರಿ 12 ಗಂಟೆಗೆ ಶ್ರೀ ಕ್ಷೇತ್ರ ಸಿದ್ದರಬೆಟ್ಟದಲ್ಲಿರುವ ಬಾಳೆಹೊನ್ನೂರು ಖಾಸಾ ಶಾ ಕಾ ಮಠದ ಶ್ರೀ ಶ್ರೀ ಷ.ಬ್ರ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಅವರು ಆಗಮಿಸಿ ಆಶೀರ್ವಚನ ನೀಡಲಿದ್ದಾರೆ.

ಬೆಳಿಗ್ಗೆ 7:00 ರಿಂದ ರಾತ್ರಿ 8ರವರೆಗೂ ವಿವಿಧ ಮಹಿಳಾ ಸಂಘದ ವತಿಯಿಂದ ಖ'ತಜ ನಾಮಗಳು, ಭಜನಾ, ಭರತನಾಟ್ಯ ಸಂಗೀತ ಕಾರ್ಯಕ್ರಮ ನಡೆಯಲಿದೆ. ಅಪನಹಳ್ಳಿ ಗ್ರಾಮದಲ್ಲಿ ಶಿವರಾತ್ರಿ ಆಚರಣೆ:– ತಾಲೂಕಿನ ದೊಡ್ಡೇರಿ ಹೋಬಳಿ ಅಪ್ಪನ ಹಳ್ಳಿ ಗ್ರಾಮದಲ್ಲಿ ಶ್ರೀ ನಂಜುಂಡೇಶ್ವರ ಸ್ವಾಮಿ ಸೇವಾ ಟ್ರಸ್ಟ್ ನ ವತಿಯಿಂದ ಶ್ರೀ ನಂಜುಂಡೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ನಡೆಯಲಿದೆ. ಶಿವರಾತ್ರಿ ಹಬ್ಬದಂದು ರುದ್ರಾಭಿಷೇಕ, ಬಿಲ್ವಾರ್ಚನೆ, ಸಹಸ್ರನಾಮ ಹಾಗೂ ಪೂಜಾ ಕಾರ್ಯಕ್ರಮಗಳು ನಡೆಯಲಿದ್ದು.ಗುರುವಾರದಂದು ಅನ್ನ ಸಂತರ್ಪಣೆ ನಡೆಯಲಿದೆ.

ಸಂಸ್ಕಾರ ರೂಢಿಸಲು ಮಠ ಅಗತ್ಯ

ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ

ಗುಬ್ಬಿ: ಕುಟುಂಬದ ಸದಸ್ಯರೆಲ್ಲಾ ಸಾಮರಸ್ಯದಿಂದ ಇದ್ದು ಸಂಸ್ಕಾರ ರೂಢಿಸಿಕೊಂಡಲ್ಲಿ ಮನೆಯೇ ಕೈಲಾಸವಾಗುತ್ತದೆ ಎಂದು ದೊಡ್ಡಗುಣಿ ಹಿರೇಮಠದ ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ದೊಡ್ಡಗುಣಿಯಲ್ಲಿ ಜನ್ಮವರ್ಧಂತಿ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಾಜದಲ್ಲಿ ಸಂಸ್ಕಾರ ರೂಢಿಸಲು ಮಠಗಳ ಅಗತ್ಯವಿದೆ. ಯುವ ಪೀಳಿಗೆಯಲ್ಲಿ ಮಠಮಾನ್ಯಗಳ ಬಗ್ಗೆ ಗೌರವ ಕಡಿಮೆಯಾಗುತ್ತಿರುವುದು ದುರದೃಷ್ಟಕರ ಎಂದರು.

ಕೇಂದ್ರ ಸಚಿವ ವಿ.ಸೋಮಣ್ಣ ಮಾತನಾಡಿ, ಗುರುಗಳ ಮಾರ್ಗದರ್ಶನ ಇದ್ದಲ್ಲಿ ಮಾತ್ರ ಸಂಸ್ಕಾರವಂತರಾಗಲು ಸಾಧ್ಯ. ಮಠಗಳು ಇದ್ದಲ್ಲಿ ಮಾತ್ರ ಧರ್ಮ ಜಾಗೃತಿ ಹೆಚ್ಚಾಗಿ ಪ್ರಜ್ಞಾವಂತಿಕೆ ಮೂಡಿಸಿಕೊಳ್ಳುತ್ತೇವೆ. ಮನಸ್ಸಿನ ಅಜ್ಞಾನ ಹೋಗಲಾಡಿಸಿ ಜ್ಞಾನದ ಬೆಳಕನ್ನು ಬೆಳಗಿಸಲು ಗುರುಗಳ ಅಗತ್ಯವಿದೆ ಎಂದರು.

ಮಠದ ಆವರಣದಲ್ಲಿ ನಿರ್ಮಾಣವಾಗುತ್ತಿರುವ ಸಮುದಾಯ ಭವನಕ್ಕೆ ಅನುದಾನ ನೀಡುವುದಾಗಿ ತಿಳಿಸಿದರು.

ಜನ್ಮವರ್ಧಂತಿಯ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮ ನಡೆಯಿತು. ರೇಣುಕ ಪ್ರಸಾದ್, ಮುಕ್ತಾಂಬ, ಬೀರೂರು ಶಿವಸ್ವಾಮಿ, ಸದಾನಂದ, ರಾಜಕುಮಾರ, ಸಿದ್ದಲಿಂಗರಾಧ್ಯ, ಲೋಕೇಶ್, ಡಿ.ಆರ್ ಸಚ್ಚಿದಾನಂದ ಸ್ವಾಮಿ, ಗುರು ರೇಣುಕಾರಾಧ್ಯ, ಜ್ಯೋತಿ ಪ್ರಕಾಶ್ ಇದ್ದರು.

ಮಾ.3 ರಿಂದ ಬೆಂಗಳೂರಿನಲ್ಲಿ ಶ್ರಮಜೀವಿಗಳ ಅಹೋ ರಾತ್ರಿ ಹೋರಾಟ: ಅಧ್ಯಕ್ಷೆ ಸುಶೀಲಮ್ಮ

ಪಾವಗಡ: ಸಿಐಟಿಯು, ಬಿಸಿಯೂಟ, ಅಂಗನವಾಡಿ, ಹಮಾಲಿ ಹಾಗೂ ಕಟ್ಟಡ ಕಾರ್ಮಿಕ ಹಾಗೂ ಇತರೆ ವಿವಿಧ ವಲಯದ ಸಂಘಟನೆಗಳಿಂದ ಮಾರ್ಚ್ 3 ರಿಂದ ಮಾ.7 ನೇ ತಾರೀಖಿನವರೆಗೂ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಹಮ್ಮಿಕೊಂಡಿದ್ದ ಅಹೋರಾತ್ರಿ ಹೋರಾಟದಲ್ಲಿ ಪಾವಗಡ ತಾಲೂಕಿನಿಂದ 10ಸಾವಿರಕ್ಕೂ ಅಧಿಕ ಸಂಖ್ಯೆಯ ಶ್ರಮಜೀವಿಗಳು ತೆರಳಿ ಪ್ರತಿಭಟನೆಯಲ್ಲಿ ಭಾಗವಹಿಸಲಿರುವುದಾಗಿ ತಾಲೂಕು ಸಿಐಟಿಯು ಸಂಘಟನೆಯ ಅಧ್ಯಕ್ಷೆ ಸುಶೀಲಮ್ಮ ತಿಳಿಸಿದ್ದಾರೆ.

ಅವರು ಸೋಮವಾರ ಪಟ್ಟಣದ ನಿರೀಕ್ಷಣಾ ಮಂದಿರದಲ್ಲಿ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಸುಶೀಲಮ್ಮ ಇಲ್ಲಿನ ಗ್ರಾಮ ಪಂಚಾಯಿತಿ ನೌಕರರು,ಅಕ್ಷರ ದಾಸೋಹ ನೌಕರರು,ಕಟ್ಟಡ ನಿರ್ಮಾಣ ಕಾರ್ಮಿಕರು,ಸಂಘಟಿತ ಮತ್ತು ಅಸಂಘಟಿತ ವಲಯದ ಕಾರ್ಮಿಕರು, ಅಂಗನವಾಡಿ ನೌಕರರು ಸೇರಿದಂತೆ ವಿವಿಧ ವಲಯಗಳ ನೌಕರರ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕು. ಜೊತೆಗೆ ಪರಿಹಾರ ಕುರಿತು ಕರ್ನಾಟಕ ಸರ್ಕಾರದ 2025 ನೇ ಸಾಲಿನ ರಾಜ್ಯ ಬಜೆಟ್ ನಲ್ಲಿ ಘೋಷಿಸುವಂತೆ ಆಗ್ರಹಿಸಲಾಗುವುದು ಈ ಹಿನ್ನಲೆಯಲ್ಲಿ ಅಸಂಘಟಿತ ವಲಯಗಳಿಂದ ಸುಮಾರು 10 ಸಾವಿರಕ್ಕಿಂತ ಹೆಚ್ಚು ಮಂದಿ ತೆರಳಿ ಬೆಂಗಳೂರಿನ ಪ್ರತಿಭಟನೆಯಲ್ಲಿ ಭಾಗವಹಿಸಿ ಒತ್ತಾಯಿಸುವುದಾಗಿ ತಿಳಿಸಿದರು.

ಇದೇ ವೇಳೆ ಅಂಗನವಾಡಿ ಸಂಘಟನೆಯ ಕಾರ್ಯದರ್ಶಿ ಶಿವಗಂಗಮ್ಮ, ಅಕ್ಷರ ದಾಸೋಹದ ಕೆಂಚಮ್ಮ,ನಾಗರತ್ನ,ರಮ್ಯಾ,ಕಟ್ಟಡ ಕಾರ್ಮಿಕ ಸಂಘಟನೆಯ ಅಧ್ಯಕ್ಷ ರಾಮಾಂಜಿನಪ್ಪ, ಕಾರ್ಯದರ್ಶಿ ವಿ.ಎಚ್.ರಾಮಾಂಜಿ, ಖಜಾಂಚಿ ಮಮತಾ, ಎಪಿಎಂಸಿ ನಾಗರಾಜು, ಬಸ್ ನಿಲ್ದಾಣ ಹಮಾಲಿ ಸಂಘದ ಕಾರ್ಯ ದರ್ಶಿ ಮೊದ್ಲೇಟಪ್ಪ ಗ್ರಾಮಾಂತರ ಹಮಾಲಿ ಸಂಘದ ಬಡೇಸಾಬ್ ಹಾಗೂ ಇತರೆ ಅನೇಕ ಮಂದಿ ವಿವಿಧ ವಲಯಗಳ ಸಂಘಟನೆಯ ಪದಾಧಿಕಾರಿಗಳಿದ್ದರು.

'ಹುಳಿಯಾರು ಪಪಂನಲ್ಲಿ ಪೌರ ಕಾರ್ಮಿಕರ ದರ್ಬಾರ್‌ಗೆ ಕೊನೆ ಎಂದು?'

ಹುಳಿಯಾರು: ಹುಳಿಯಾರು ಪೌರಕಾರ್ಮಿಕನನ್ನು ಅನಧಿಕೃತವಾಗಿ ಕಂಪ್ಯೂಟರ್ ಆಪರೇಟರ್ ಆಗಿ ನೇಮಕ ಮಾಡಿಕೊಂಡು ಡಾಂಗಲ್ ಕೊಟ್ಟು ಇ–ಖಾತೆ ಮಾಡಿಸುತ್ತಿದ್ದನ್ನು ಲೋಕಯುಕ್ತ ಇನ್ಸ್‌ಪೆಕ್ಟರ್ ಸುರೇಶ್ ಅವರು ಖುದ್ದು ಕಚೇರಿಗೆ ಭೇಟಿ ನೀಡಿ ಬೆಳಕಿಗೆ ತಂದ ಪ್ರಕರಣ ಇನ್ನೂ ಹಸಿರಾಗಿರುವಾಗಲೇ ಮತ್ತೊಬ್ಬ ಪೌರಕಾರ್ಮಿಕನ್ನು ಅನಧಿಕೃತವಾಗಿ ಡ್ರೈವರ್ ಆಗಿ ನೇಮಕ ಮಾಡಿಕೊಂಡ ಪ್ರಕರಣವನ್ನು ಸಾರ್ವಜನಿಕರೇ ಖುದ್ದು ಬೆಳಕಿಗೆ ತಂದಿದ್ದಾರೆ.

ಹುಳಿಯಾರಿನ ಆರ್ಯವೈಶ್ಯ ಮಂಡಳಿ ಅಧ್ಯಕ್ಷರಾದ ಎಲ್.ಆರ್. ಚಂದ್ರಶೇಖರ್ ಅವರು ಈ ಪ್ರಕರಣವನ್ನು ಬೆಳಕಿಗೆ ತಂದಿದ್ದಾರಲ್ಲದೆ ಈತ ಸಾರ್ವಜನಿಕರೊಂದಿಗೆ ಅಸಭ್ಯ ಮತ್ತು ಅನಾಗರಿಕತೆಯಿಂದ ವರ್ತಿಸುತ್ತಿದ್ದು ಈತನನ್ನು ಮೂಲ ಹುದ್ದೆಯಾದ ಪೌರಕಾರ್ಮಿಕ ಕೆಲಸಕ್ಕೆ ನಿಯೋಜಿಸಿ ಪಟ್ಟಣ ಸ್ವಚ್ಚತೆಗೆ ಕಳುಹಿಸುವಂತೆ ಏಕಾಂಗಿಯಾಗಿ ಪಂಚಾಯ್ತಿ ಮುಂದೆ ಧರಣಿ ಸಹ ನಡೆಸಿದರು. ಪಪಂ ಮಾಜಿ ಉಪಾಧ್ಯಕ್ಷೆ ಶೃತಿ ಸನತ್ ಅವರು ಮನವೊಲಿಸಿ ಧರಣಿ ಹಿಂಪಡೆಯುವಂತೆ ಮಾಡಲು ಯಶಸ್ವಿಯಾದರು.

ಪೌರಕಾರ್ಮಿಕ ಕುಮಾರ್ ಎಂಬುವವರನ್ನು ಪಟ್ಟಣದ ಕಸ ಸಂಗ್ರಹಿಸುವ ವಾಹನಕ್ಕೆ ಅನಧಿಕೃತವಾಗಿ ಡ್ರೈವರ್ ಆಗಿ ನೇಮಕ ಮಾಡಿಕೊಂಡಿದ್ದಾರೆ. ಈತ ಕಸ ಸಂಗ್ರಹಿಸುವಾಗ ಸಾರ್ವಜನಿಕರೊಂದಿಗೆ ಅಸಭ್ಯವಾಗಿ ವರ್ತಿಸುತ್ತಾನೆ. ಇವನಿದ್ದಲ್ಲಿ ಹೋಗಿ ಕಸ ಹಾಕದಿದ್ದರೆ ಬಾಯಿಗೆ ಬಂದಕ್ಕೆ ಬೈಯುವ ಜೊಗೆ ಹೊಡೆಯಲು ಹೋದ ಪ್ರಕರಣಗಳು ಸಾಕಷ್ಟಿವೆ ಎಂದು ಚಂದ್ರಶೇಖರ್ ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ಇ–ಖಾತೆಗೆ ಅರ್ಜಿ ಸಲ್ಲಿಸಲು ಬಂದಿದ್ದ ಸಾರ್ವಜನಿಕರಲ್ಲಿ ಒಬ್ಬೊಬ್ಬರು ಒಂದೊಂದು ಈತನ ಮೇಲೆ ದೂರು ಹೇಳಿದರು. ಕೆಂಚಾಂಬ ನಗರದ ಗೃಹಿಣಿಯೊಬ್ಬರು ನಿತ್ಯ ಕಸ ಹಾಕುವಾಗ ನಮ್ಮ ಏರಿಯಾದಲ್ಲಿ ನಿತ್ಯ ಒಬ್ಬೊಬ್ಬರ ಜೊತೆ ಜಗಳವಾಡುತ್ತಾರೆ ಎಂದರೆ, ವಿನಾಯಕ ನಗರದ ವ್ಯಕ್ತಿಯೊಬ್ಬ ಒಂದೇ ಏರಿಯಾದಲ್ಲೇ ನೀರು ಬಿಡ್ತಿಯಲ್ಲಪ್ಪ ನಮ್ಮ ಕಡೆ ಏಕೆ ನೀರು ಬಿಡಲ್ಲ ಎಂದಿದಕ್ಕೆ ಅಶ್ಲೀಲ ಪದ ಬಳಸಿ ಮಾತನಾಡಿದ ಆಗ ನಮ್ಮ ಏರಿಯಾದ ಗೃಹಿಣಿಯೆಲ್ಲರೂ ತಿರುಗಿ ಬಿದ್ದಾಗ ಜಗಳಕ್ಕೆ ಹೋದ ಎಂದರು, ಮುಸ್ಲೀಂ ಬೀದಿಯ ನಿವಾಸಿ ನೀರು ಬಿಡು ಎಂದು ಕೇಳಿದಕ್ಕೆ ಹೊಡೆಯಲೇ ಬಂದಿದ್ದ ಎಂದು ದೂರಿದರು. ಈತನನ್ನು ಫಾಗಿಂಗ್ ಮಾಡಲು ಕಳುಹಿಸಿದಾಗ ದಾರಿಹೋಕನ ಪಕ್ಕಕ್ಕೆ ವಾಹನ ತೆಗೆದುಕೊಂಡು ಹೋಗಿ ಫಾಗಿಂಗ್ ಮಾಡಿ ಆತನ ಜರ್ಕಿನ್ ಹಾಗೂ ಕೈ ಮುಖ ಸುಟ್ಟು ಆತನ ಮೇಲೆಯೇ ಎಗರಾಡಿದ್ದಾನೆ ಎಂಬ ಗಂಭೀರ ಆರೋಪವನ್ನೇ ಜನರು ಮಾಡಿದರು. ಅಲ್ಲದೆ ಪಪಂ ಸದಸ್ಯೆ ಶೃತಿ ಕೂಡ ಎಲ್ಲಾ ಏರಿಯಾದಲ್ಲೂ ಈತ ಗಲಾಟೆ ಮಾಡಿಕೊಳ್ಳುತ್ತಿರುವ ದೂರು ಕೇಳಿ ಬಂದ ಹಿನ್ನೆಲೆಯಲ್ಲೇ ನಮ್ಮ ಏರಿಯಾಕ್ಕೆ ಹಾಕಿಸಿಕೊಂಡೆ. ಆದರೆ ಇಲ್ಲೂ ಸಹ ಈತನ ಚಾಳಿ ಬಿಟ್ಟಿಲ್ಲ. ಹಾಗಾಗಿ ಮುಖ್ಯಾಧಿಕಾರಿಗಳ ಬಳಿ ಪಟ್ಟು ಹಿಡಿದು ಈತನನ್ನು ಪೌರಕಾರ್ಮಿಕ ಹುದ್ದೆಗೆ ಮರಳಿಸುವುದಾಗಿ ಅಲ್ಲಿದ್ದ ಜನರಿಗೆ ಭರವಸೆ ನೀಡಿದರು.

ಬಿಎಸ್‌ಎನ್‌ಎಲ್ : ಬಾಡಿಗೆಗಾಗಿ ಖಾಲಿ ಜಾಗ ಲಭ್ಯ

ತುಮಕೂರು: ಜಿಲ್ಲೆಯಲ್ಲಿ ಬಿಎಸ್ ಎನ್‌ಎಲ್ ವ್ಯಾಪ್ತಿಗೊಳಪಡುವ ಖಾಲಿ ಜಾಗಗಳನ್ನು ಬಾಡಿಗೆ ನೀಡಲು ಉದ್ದೇಶಿಸಿದೆ. ಕೇಂದ್ರ/ ರಾಜ್ಯ ಸರ್ಕಾರ, ಖಾಸಗಿ ವಲಯದ ಉದ್ಯಮ, ಬ್ಯಾಂಕುಗಳಿಗೆ ಆದ್ಯತೆ ನೀಡಲಾಗುವುದು. ಬಾಡಿಗೆ ಆಧಾರದ ಮೇಲೆ ಖಾಲಿ ಜಾಗದ ಅವಶ್ಯಕತೆ ಇರುವವರು ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9422041190/ 9486101729ನ್ನು ಸಂಪರ್ಕಿಸಲು ಕೋರಲಾಗಿದೆ.

ಹಿಂದುಳಿದ ವರ್ಗಗಳ ತಾಲ್ಲೂಕು ಸಲಹಾ ಸಮಿತಿಯ ಸದಸ್ಯತ್ವಕ್ಕೆ ಅರ್ಜಿ ಅಹ್ವಾನ

ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ತಾಲ್ಲೂಕು ಮಟ್ಟದ ಸಲಹಾ ಸಮಿತಿಯ ಸದಸ್ಯತ್ವಕ್ಕಾಗಿ ಹಿಂದುಳಿದ ವರ್ಗಗಳ ಅಲೆಮಾರಿ, ಅರೆಅಲೆಮಾರಿ ಸಮುದಾಯಕ್ಕೆ ಸೇರಿದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಧಿಕಾರಿಗಳ ಕಛೇರಿ ಒಕ್ಕಲಿಗರ ಕಾಂಪ್ಲೆಕ್ಸ್ ಕೆ. ಎಸ್. ಆರ್. ಟಿ. ಸಿ. ಬಸ್ ಸ್ಟಾಂಡ್ ಹತ್ತಿರ ಮಧುಗಿರಿ ಟೌನ್ ಇಲ್ಲಿ ಪಡೆದುಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಫೆ. 27 ರೊಳಗೆ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 9902258295, 8884785592 ಸಂಪರ್ಕಿಸಬಹುದು.

ಆಶ್ರಮದಲ್ಲಿ ಇಂದು ಶಿವರಾತ್ರಿ ಸತ್ಸಂಗ'

ತುಮಕೂರು : ತುಮಕೂರಿನ ರಾಮಕೃಷ್ಣ–ವಿವೇಕಾನಂದ ಆಶ್ರಮದಲ್ಲಿ ಇದೇ 2025ರ ಫೆಬ್ರವರಿ 26, ಬುಧವಾರದಂದು ಮಹಾಶಿವರಾತ್ರಿಯ ಪ್ರಯುಕ್ತ ವಿಶೇಷ ಸತ್ಸಂಗ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಂಜೆ 4.00 ಗಂಟೆಯಿಂದ 6 ಗಂಟೆಯವರೆಗೆ ವೇದಮೂರ್ತಿ ಬ್ರಹ್ಮಶ್ರೀ ಬಿದರೆ ಶ್ರೀಹರಿಶರ್ಮ ಹಾಗೂ ವಿದ್ವಾನ್ ಶ್ರೀ ಪ್ರಶಾಂತ್‌ರವರು ಏಕವಾರ ರುದ್ರಾಭಿಷೇಕವನ್ನು ನೆರವೇರಿಸಿಕೊಡಲಿದ್ದಾರೆ. 6 ಗಂಟೆಯಿಂದ 8.30ರವರೆಗೆ ವಿಶೇಷ ಭಗನ್ನಾಮ ಸಂಕೀರ್ತನೆಯನ್ನು ಏರ್ಪಡಿಸಲಾಗಿದೆ.

ಸಾರ್ವಜನಿಕ ಭಕ್ತಜನರು ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಆಶ್ರಮದ ಪ್ರಕಟಣೆ ತಿಳಿಸಿದೆ.

ಜೆಡಿಯು ಬಲವರ್ಧನೆಗೆ ಕಾರ್ಯಯೋಜನೆ;

ರಾಜ್ಯಾಧ್ಯಕ್ಷ ಮಹಿಮಾ ಪಟೇಲ್ ನೇತೃತ್ವದಲ್ಲಿ ಸಭೆ

ತುಮಕೂರು: ಸಂಯುಕ್ತ ಜನತಾದಳ ರಾಜ್ಯಾಧ್ಯಕ್ಷ ಮಹಿಮಾ ಪಟೇಲ್ ಹಾಗೂ ಪಕ್ಷದ ಮುಖಂಡರು ಸೋಮವಾರ ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿ ಡಾ.ಶಿವಕುಮಾರ ಸ್ವಾಮೀಜಿಗಳ ಗದ್ದುಗೆಗೆ ಪೂಜೆ ಸಲ್ಲಿಸಿ ನಂತರ ಸಿದ್ಧಲಿಂಗ ಸ್ವಾಮೀಜಿಗಳ ಆಶೀರ್ವಾದ ಪಡೆದರು.

ಪಕ್ಷದ ಆಗ್ನೇಯ ಪದವಿಧರರ ಕ್ಷೇತ್ರದ ಅಭ್ಯರ್ಥಿ ಡಾ.ಕೆ.ನಾಗರಾಜ ಅವರೊಂದಿಗೆ ಮಹಿಮಾ ಪಟೇಲ್ ಅವರು ಸಿದ್ಧಗಂಗಾ ಇಂಜಿನಿಯರಿಂಗ್ ಕಾಲೇಜು, ವಿಶ್ವವಿದ್ಯಾಲಯ ಸೇರಿದಂತೆ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ಆಗ್ನೇಯ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಡಾ.ನಾಗರಾಜ ಅವರನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ನಂತರ ಖಾಸಗಿ ಹೋಟೆಲ್‌ನಲ್ಲಿ ಮುಖಂಡರು ಸಭೆ ಸೇರಿ, ಜಿಲ್ಲೆಯಲ್ಲಿ ಪಕ್ಷದ ಸಂಘಟನೆ ಕುರಿತು ಚರ್ಚೆ ಮಾಡಿದರು. ಮುಂಬರುವ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯ್ತಿ ಚುನಾವನೆಗಳಲ್ಲಿ ಪಕ್ಷದ ಸಮರ್ಥ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ತೀರ್ಮಾನಿಸಲಾಯಿತು. ಸಂಯುಕ್ತ ಜನತಾದಳದ ತತ್ವ ಸಿದ್ಧಾಂತ ಒಪ್ಪಿ ಬರುವವರನ್ನು ಪಕ್ಷಕ್ಕೆ ಬರಮಾಡಿಕೊಳ್ಳಬೇಕು ಎಂದು ಹೇಳಿದ ರಾಜ್ಯಾಧ್ಯಕ್ಷ ಮಹಿಮಾ ಪಟೇಲ್, ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಆರ್.ರಂಗನಾಥ್ ಅವರ ನೇತೃತ್ವದಲ್ಲಿ ತುಮಕೂರು ಜಿಲ್ಲೆಯಲ್ಲಿ ಪಕ್ಷ ಸಂಘಟನೆಗೆ ಸಲಹೆ ಮಾಡಿದರು.

ಸರ್ವೋದಯ ಕರ್ನಾಟಕ ಆಶಯದ ಸಂಯುಕ್ತ ಜನತಾದಳ ಸೇರಲು ಇಚ್ಚಿಸುವವರು ಕೆ.ಆರ್.ರಂಗನಾಥ್ ಮೊಬೈಲ್ ನಂ. 9449666809 ಸಂಪರ್ಕಿಸಲು ಕೋರಲಾಗಿದೆ.

ಸ್ಲಂ ಜನರ ಶಕ್ತಿ ಚೈತನ್ಯದಿಂದ ಹಕ್ಕುಪಡೆಯಲು ಕರೆ: ಸಾಹಿತಿ ದು.ಸರಸ್ವತಿ

ತುಮಕೂರು: ನಾವು ಇಂದು ದುರಿತ ಕಾಲದಲ್ಲಿ ಬದುಕುತ್ತಿದ್ದು ಇಡೀ ನಗರಕ್ಕೆ ತಮ್ಮ ಶ್ರಮದಿಂದ ಅಭಿವೃದ್ಧಿ ಶಕ್ತಿ ತುಂಬುತ್ತಿರುವ ಸ್ಲಂ